ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕನ್ನಡ ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ

ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

291 (429) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕನ್ನಡ ಸಂಘಸಂಸ್ಥೆಗಳಿಗೆ ನೀಡುತ್ತಿದ್ದ ಅನುದಾನವನ್ನು ಕಳೆದ ಎರಡು ವರ್ಷಗಳಿಂದ ನಿಲ್ಲಿಸಿರುವುದು ನಿಜವೆ; ನಿಜವಾದರೆ, ಅದಕ್ಕೆ ಕಾರಣಗಳೇನು;

(ಆ) ಬೆಂಗಳೂರಿನಲ್ಲಿ ಅನೇಕ ಸಂಸ್ಥೆಗಳು ಕನ್ನಡ ಸಾಹಿತ್ಯ, ಸಂಸ್ಕೃತಿ ಮತ್ತು ಸಾಮಾಜಿಕ ಚಟುವಟಿಕೆಗಳನ್ನು ನಡೆಸುತ್ತಿದ್ದು, ಈ ರೀತಿ ಅನುದಾನ ನೀಡದಿದ್ದಲ್ಲಿ ಚಟುವಟಿಕೆಗಳು ನಿಂತು ಹೋಗಿ ಸಾರ್ವಜನಿಕರಿಗೆ ತೊಂದರೆಯಾಗುವುದಿಲ್ಲವೆ;

(ಇ) ಸರ್ಕಾರ ಮಾಡಬೇಕಾದ ಅನೇಕ ಕೆಲಸಗಳನ್ನು ಈ ಸಂಘ ಸಂಸ್ಥೆಗಳು ಮಾಡುತ್ತಿದ್ದು, ಅದಕ್ಕೆ ಪ್ರೋತ್ಸಾಹ ನೀಡುವುದು ಸರ್ಕಾರದ ಜವಾಬ್ದಾರಿಯಲ್ಲವೆ;

(ಈ) ಈ ವರ್ಷವಾದರೂ ಸಂಘ ಸಂಸ್ಥೆಗಳಿಗೆ ನೀಡಬೇಕಾದ ಅನುದಾನವನ್ನು ನೀಡಲು ಕ್ರಮ ಕೈಗೊಳ್ಳಲಾಗುವುದೇ?